ಲಿಖಿತ ಮೂಲಕ ಉತ್ತರಿಸುವ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಗುರುವಾರ, ದಿನಾಂಕ : 19 ನೇ ಮಾರ್ಚ್, 2020

ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಪೊಲೀಸ್ ಅಧೀಕ್ಷಕರ ಕಛೇರಿ ವರ್ಗಾಯಿಸುವ ಬಗ್ಗೆ

ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) :-

1293 (1440) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಪೊಲೀಸ್ ಅಧೀಕ್ಷಕರ ಕಛೇರಿಯನ್ನು ಮಂಗಳೂರು ನಗರದಿಂದ ಹೊರಭಾಗಕ್ಕೆ ವರ್ಗಾಯಿಸಲು ಸರ್ಕಾರ ಕ್ರಮಕೈಗೊಳ್ಳುವುದಾಗಿ ತಿಳಿಸಿದ್ದರೂ ಕಾರ್ಯಗತಗೊಳ್ಳದೇ ಇರಲು ಕಾರಣಗಳೇನು ; (ವಿವರ ನೀಡುವುದು)

(ಆ) ಪೊಲೀಸ್ ಅಧಿಕ್ಷಕರ ಕಛೇರಿ ನಗರದಲ್ಲಿ ಕಾರ್ಯ ನಿರ್ವಹಿಸುವುದರಿಂದ ತುರ್ತು ಸಂದರ್ಭಗಳಲ್ಲಿ ತೊಂದರೆಗಳನ್ನು ಅನುಭವಿಸುವುದು ಸರ್ಕಾರದ ಗಮನದಲ್ಲಿದೆಯೇ;

(ಇ) ಪೊಲೀಸ್ ಅಧಿಕ್ಷಕರ ಕಛೇರಿ ನಗರವನ್ನು ಬಿಟ್ಟು ಬಂಟ್ವಾಳದಲ್ಲಿ ತೆರೆಯಬೇಕೆಂಬ ಬೇಡಿಕೆ ಬಗ್ಗೆ ಸರ್ಕಾರ ಪರಿಶೀಲಿಸಿದೆಯೇ ; (ವಿವರ ನೀಡುವುದು)

(ಈ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಖಾಲಿ ಇರುವ ಪೊಲೀಸ್ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ವಿವರ ನೀಡುವುದು)